ಪತ್ರಿಕಾ ತುಣುಕುಗಳು
**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19 (ಕರ್ನಾಟಕ ವಿಧಾನ ಸಭೆ ಶಾಸಕರು)

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE: 30/8/2020

# ಎಸ್.ಮುನಿರತ್ನ, ರೆಡ್ಡಿಗೆ ಪಾಸಿಟಿವ್

**ಬೆಂಗಳೂರು:** ರಾಜರಾಜೇಶ್ವರಿ ವಿಧಾನಸಭೆ ಕ್ಷೇತ್ರದ ಮಾಜಿ ಶಾಸಕ, ಬಿಜೆಪಿ ಮುಖಂಡ ಎಸ್. ಮುನಿರತ್ನ ಅವರಿಗೆ ಸೋಂಕು ದೃಢಪಟ್ಟಿದೆ. ಶನಿವಾರ ಕೋವಿಡ್ ಪರೀಕ್ಷೆಗೆ ಒಳಗಾಗಿದ್ದಾಗ ಪಾಸಿಟಿವ್ ಇರುವುದು ಗೊತ್ತಾಗಿದೆ.

ಸೋಂಕು ದೃಢಪಟ್ಟ ಹಿನ್ನೆಲೆಯಲ್ಲಿ ಮಾಜಿ ಸಚಿವ ಗಾಲಿ ಜನಾರ್ದನ ರೆಡ್ಡಿ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸುಪ್ರೀಂ ಕೋರ್ಟ್ ಅನುಮತಿ ನೀಡಿದ ಹಿನ್ನೆಲೆಯಲ್ಲಿ ರೆಡ್ಡಿ ಅವರು ಇಂದು (ಆ.30) ಬಳ್ಳಾರಿಗೆ ಆಗಮಿಸ ತೆರಳಬೇಕಿತ್ತು. "ಆ.30ರಂದು ಸಚಿವ ಶ್ರೀರಾಮುಲು ತಾಯಿಯ ಪುಣ್ಯ ತಿಥಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಸಾಧ್ಯವಾಗುತ್ತಿಲ್ಲ" ಎಂದು ಫೇಸ್ ಬುಕ್‌ನಲ್ಲಿ ವಿಷಯ ಹಂಚಿಕೊಂಡಿದ್ದಾರೆ.

ಕಡೂರು ಶಾಸಕ ಬೆಳ್ಳಿ ಪ್ರಕಾಶ್ ಅವರಿಗೂ ವೈರಸ್ ತಗುಲಿದ್ದು, ಬೆಂಗಳೂರಿನ ಸುಗುಣ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ಒಳಗಾಗಿದ್ದಾರೆ.

ಸುಳ್ಯ ಶಾಸಕ ಎಸ್. ಅಂಗಾರ ಪತ್ನಿಗೂ ಕೊರೊನಾ ಪಾಸಿಟಿವ್ ದೃಢಪಟ್ಟಿದೆ. ಶುಕ್ರವಾರ ಶಾಸಕರು ಹಾಗೂ ಅವರ ಕಾರು ಚಾಲಕರಿಗೆ ಪಾಸಿಟಿವ್ ಬಂದಿತ್ತು. ಅವರಿಬ್ಬರೂ ಕ್ವಾರಂಟೈನ್‌ನಲ್ಲಿದ್ದಾರೆ. ಶನಿವಾರ ಇವರಿಬ್ಬರ ಮನೆಯವರಿಗೆ ಆ್ಯಂಟಿಜೆನ್ ಪರೀಕ್ಷೆ ನಡೆಸಲಾಯಿತು.